ಕರ್ನಾಟಕ ಸರ್ಕಾರ
**ಉಪನಿರ್ದೇಶಕರ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ. ಜಿಲ್ಲಾ ಆಡಳಿತ ಭವನ,ಹೊಸಪೇಟೆ ರಸ್ತೆ**
ಕೊಪ್ಪಳ. ದೂ.ಸಂಖ್ಯೆ:08539-222703
E-ail:ddwcdkpl@gmail.com

ಸಂಖ್ಯೆ:ಉನಿಕೊ/ಮಮಅಇ/ಪೋ.ಅ/ನೇಮಕ ಅರ್ಜಿ/2019-20

ದಿನಾಂಕ:21.01.2020

## ಪತ್ರಿಕಾ ಪ್ರಕಟಣೆ

ವಿಷಯ: ರಾಷ್ಟ್ರೀಯ ಪೋಷಣ್ ಅಭಿಯಾನ ಯೋಜನೆಯನ್ನು ಅನುಷ್ಠಾನಗೊಳಿಸಲು ಗೌರವಧನ ಆಧಾರದ ಮೇಲೆ ವಿವಿಧ ಹುದ್ದೆಗಳನ್ನು ಭರ್ತಿ ಮಾಡಲು ಅರ್ಜಿ ಆಹ್ವಾನಿಸುತ್ತಿರುವ ಬಗ್ಗೆ.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಪೋಷಣ ಅಭಿಯಾನ ಯೋಜನೆಯ ಅನುಷ್ಠಾನಕ್ಕಾಗಿ ಕೊಪ್ಪಳ ಜಿಲ್ಲೆಯಲ್ಲಿ ಕರ್ತವ್ಯ ನಿರ್ವಹಿಸಲು ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಸಂಯೋಜಕರು-01 ಹುದ್ದೆ & ಜಿಲ್ಲಾ ಕಾರ್ಯಕ್ರಮ ಸಹಾಯಕರು-01 ಹುದ್ದೆ ತಾಲೂಕು ಮಟ್ಟದಲ್ಲಿ ಕೆಲಸನಿರ್ವಹಿಸಲು ತಾಲೂಕಾ ಸಂಯೋಜಕರು-05 ಹುದ್ದೆಗಳು & ತಾಲೂಕಾ ಕಾರ್ಯಕ್ರಮ ಸಹಾಯಕರು-05 ಹುದ್ದೆಗಳು ಒಟ್ಟು 12 ಹುದ್ದೆಗಳನ್ನು ನೇರಗುತ್ತಿಗೆ ಆಧಾರದ ಮೇರೆಗೆ ನಿಗದಿಪಡಿಸಿರುವ ವಿದ್ಯಾರ್ಹತೆಯನ್ನು ಹೊಂದಿದ, ಹೆಚ್ಚುವರಿ ಅರ್ಹತೆಗಳು ಮತ್ತು ಅನುಭವ ಹೊಂದಿರುವ ಗಣಕಯಂತ್ರ ಸಾಕ್ಷರತೆ ಹೊಂದಿರುವ, ಕನ್ನಡ ಮತ್ತು ಇಂಗ್ಲೀಷ್ ಭಾಷೆಯನ್ನು ಓದುವ, ಬರೆಯುವ ಮತ್ತು ಮಾತನಾಡುವ ಪರಿಣಿತಿ ಹೊಂದಿರುವ ಹಾಗೂ ಯೋಜನೆಯ ಅನುಷ್ಠಾನಕ್ಕೆ ಸಂಬಂಧಪಟ್ಟ ಕೆಲಸ ಕಾರ್ಯಗಳನ್ನು ನಿರ್ವಹಿಸಲು ಸಾಮರ್ಥ್ಯ ಕೌಶಲ್ಯ ಹೊಂದಿರುವ ಅರ್ಹ ಅಭ್ಯರ್ಥಿಗಳನ್ನು ಸಂದರ್ಶನದ ಮೂಲಕ ನೇಮಕ ಮಾಡಿಕೊಳ್ಳಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತ ಅರ್ಹ ಅಭ್ಯರ್ಥಿಗಳು ದಿನಾಂಕ:22.01.2020 ರಿಂದ ನಿಗದಿತ ನಮೂನೆಯನ್ನು ಈ ಕಛೇರಿಯಿಂದ ಪಡೆಯಬಹುದು. ದಿನಾಂಕ:10.02.2020 ರ ಸಂಜೆ 5.00 ಗಂಟೆಯೊಳಗೆ ಅಗತ್ಯ ದಾಖಲೆಗಳೊಂದಿಗೆ ಮುದ್ದಾಂ ಅಥವಾ ನೊಂದಾಯಿತ ಅಂಚೆ ಮೂಲಕ ಉಪನಿರ್ದೇಶಕರು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಕೊಪ್ಪಳ ಇವರಿಗೆ ಅರ್ಜಿ ಸಲ್ಲಿಸಬಹುದಾಗಿದೆ. ದಿನಾಂಕ: 10.02.2020ರ ನಂತರ ಸ್ವೀಕೃತವಾದ ಯಾವುದೇ ರೀತಿಯ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ನೇರ ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಿಕೊಳ್ಳುತ್ತಿರುವ ಹುದ್ದೆಗಳ ವಿವರ, ಅಭ್ಯರ್ಥಿಗಳಿಗೆ ಇರಬೇಕಾಗಿರುವ ವಿದ್ಯಾರ್ಹತೆ/ಅನುಭವ/ಇತರೆ ಷರತ್ತುಗಳ ವಿವರ, ಅರ್ಜಿ ನಮೂನೆ, ಅರ್ಜಿಯೊಂದಿಗೆ ಲಗತ್ತಿಸಬೇಕಾದ ದಾಖಲಾತಿಗಳ ವಿವರ ಹಾಗೂ ಷರತ್ತು/ನಿಬಂಧನೆಗಳು ಹಾಗೂ ಇನ್ನಿತರ ಹೆಚ್ಚಿನ ಮಾಹಿತಿಗಾಗಿ ಈ ಕೆಳಗೆ ಸಹಿ ಮಾಡಿದವರನ್ನು ಕಛೇರಿ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ. ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಸಹಿ/- ಉಪ ನಿರ್ದೇಶಕರು

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕೊಪ್ಪಳ

ಡಿಐಪಿಆರ್/ಕೊಪ್ಪಳ/704/ಎಂಸಿಎ/2019-20